5

# ಕರ್ನಾಟಕ ಸರ್ಕಾರ
## ಕಾಲೇಜು ಶಿಕ್ಷಣ ಇಲಾಖೆ

ಸಂಖ್ಯೆ:ಕಾಶಿಇ/80/ಖಾಹುಮಾ/2014-15/ನೇವಿ-2/ಭಾಗ-2

ಕಾಲೇಜು ಶಿಕ್ಷಣ ಆಯುಕ್ತರ ಕಛೇರಿ,
ಬೆಂಗಳೂರು, ದಿನಾಂಕ:03.05.2023.

### ಸುತ್ತೋಲೆ

ವಿಷಯ: ಖಾಸಗಿ ಅನುದಾನಿತ ಪದವಿ ಕಾಲೇಜುಗಳಲ್ಲಿನ ಬೋಧಕ ಹುದ್ದೆಗಳ ನೇಮಕಾತಿ ಪ್ರಕ್ರಿಯೆ ಕುರಿತು.

ಉಲ್ಲೇಖ: 1) ಸರ್ಕಾರದ ಪತ್ರ ಸಂಖ್ಯೆ:ಇಡಿ/240/ಯುಪಿಸಿ/2014, ದಿ:01.09.2017.
2) ಸರ್ಕಾರದ ಪತ್ರ ಸಂಖ್ಯೆ:ಇಡಿ/160/ಯುಪಿಸಿ/2022, ದಿ:02.05.2023.

** ** **

ಉಲ್ಲೇಖ (1)ರ ಸರ್ಕಾರದ ಪತ್ರದಲ್ಲಿ ಖಾಸಗಿ ಅನುದಾನಿತ ಪ್ರಥಮ ದರ್ಜೆ ಕಾಲೇಜುಗಳಲ್ಲಿ ದಿನಾಂಕ:31.12.2015 ರೊಳಗೆ ವಿವಿಧ ಕಾರಣಗಳಿಂದ ಖಾಲಿ ಇರುವ ಬೋಧಕರ ಹುದ್ದೆಗಳನ್ನು ಭರ್ತಿ ಮಾಡಲು ಅನುಮತಿ ನೀಡಲಾಗಿರುತ್ತದೆ.

ಪ್ರಸ್ತುತ ಚುನಾವಣಾ ನೀತಿ ಸಂಹಿತೆ ಜಾರಿಯಲ್ಲಿರುವ ಹಿನ್ನೆಲೆಯಲ್ಲಿ ಆಡಳಿತ ಮಂಡಳಿಗಳು ನೇಮಕಾತಿ ಪ್ರಕ್ರಿಯೆಯನ್ನು ಕೈಗೊಳ್ಳಲು ಅವಕಾಶವಿರುವುದಿಲ್ಲ. ಆದ್ದರಿಂದ ಚುನಾವಣಾ ನೀತಿ ಸಂಹಿತೆ ಮುಕ್ತಾಯಗೊಂಡ ನಂತರ ನೇಮಕಾತಿ ಪ್ರಕ್ರಿಯೆಯನ್ನು ಕೈಗೊಳ್ಳಲು ಎಲ್ಲಾ ಆಡಳಿತ ಮಂಡಳಿಗಳಿಗೆ ನಿರ್ದೇಶನ ನೀಡಲು ಕ್ರಮ ವಹಿಸುವಂತೆ ಉಲ್ಲೇಖ (2)ರ ಸರ್ಕಾರದ ಪತ್ರದಲ್ಲಿ ನಿರ್ದೇಶಿಸಲಾಗಿರುತ್ತದೆ.

ಆದ್ದರಿಂದ ಪ್ರಸ್ತುತ ಚುನಾವಣಾ ನೀತಿ ಸಂಹಿತೆ ಜಾರಿಯಲ್ಲಿರುವುದರಿಂದ ಖಾಸಗಿ ಅನುದಾನಿತ ಪದವಿ ಕಾಲೇಜುಗಳಲ್ಲಿ ಬೋಧಕ ಹುದ್ದೆಗಳ ನೇಮಕಾತಿ ಪ್ರಕ್ರಿಯೆಗೆ ಯಾವುದೇ ಕ್ರಮ ಕೈಗೊಳ್ಳಬಾರದೆಂದೂ ಹಾಗೂ ನೀತಿ ಸಂಹಿತೆ ಮುಕ್ತಾಯಗೊಂಡ ನಂತರ ನೇಮಕಾತಿ ಪ್ರಕ್ರಿಯೆಗೆ ಅಗತ್ಯ ಕ್ರಮ ಕೈಗೊಳ್ಳುವಂತೆಯೂ ಸೂಚಿಸಲಾಗಿದೆ.

ಕಾಲೇಜು ಶಿಕ್ಷಣ ಹೆಚ್ಚುವರಿ ನಿರ್ದೇಶಕರು

ಇವರಿಗೆ,

1. ಜಂಟಿ ನಿರ್ದೇಶಕರು, ಪ್ರಾದೇಶಿಕ ಕಛೇರಿ, ಕಾಲೇಜು ಶಿಕ್ಷಣ ಇಲಾಖೆ, ಬೆಂಗಳೂರು, ಮೈಸೂರು, ಮಂಗಳೂರು, ಧಾರವಾಡ, ಶಿವಮೊಗ್ಗ & ಕಲಬುರಗಿ-ಮಾಹಿತಿ ಹಾಗೂ ಅಗತ್ಯ ಕ್ರಮಕ್ಕಾಗಿ.
2. ಇಲಾಖಾ ವ್ಯಾಪ್ತಿಗೊಳಪಡುವ ಎಲ್ಲಾ ಖಾಸಗಿ ಅನುದಾನಿತ ಪ್ರಥಮ ದರ್ಜೆ ಕಾಲೇಜುಗಳ ಆಡಳಿತ ಮಂಡಳಿಗೆ – ಮಾಹಿತಿ ಹಾಗೂ ಅಗತ್ಯ ಕ್ರಮಕ್ಕಾಗಿ.
3. ಇಲಾಖಾ ವ್ಯಾಪ್ತಿಗೊಳಪಡುವ ಎಲ್ಲಾ ಖಾಸಗಿ ಅನುದಾನಿತ ಪ್ರಥಮ ದರ್ಜೆ ಕಾಲೇಜುಗಳ ಪ್ರಾಂಶುಪಾಲರುಗಳಿಗೆ – ಮಾಹಿತಿ ಹಾಗೂ ಅಗತ್ಯ ಕ್ರಮಕ್ಕಾಗಿ.
4. ಮಾಹಿತಿ ಅಧಿಕಾರಿಗಳು, ಕೇಂದ್ರ ಕಛೇರಿ, ಕಾಲೇಜು ಶಿಕ್ಷಣ ಇಲಾಖೆ, ಬೆಂಗಳೂರು-ಈ ಸುತ್ತೋಲೆಯನ್ನು ಇಲಾಖೆಯ ವೆಬ್‌ಸೈಟ್‌ನಲ್ಲಿ ಪ್ರಕಟಿಸುವಂತೆ ಸೂಚಿಸಲಾಗಿದೆ.
5. ಹೆಚ್ಚುವರಿ ಪ್ರತಿ.
6. ಕಛೇರಿ ಪ್ರತಿ.